**Bangalore**
**Regional News**
**30.08.2024 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ರಾಜ್ಯಾದ್ಯಂತ ಪ್ರತಿ ತಿಂಗಳು ಆಹಾರ ಸುರಕ್ಷತಾ ಅಧಿಕಾರಿಗಳಿಂದ ತಿಂಡಿ-ತಿನಿಸುಗಳ ಗುಣಮಟ್ಟ ಪರಿಶೀಲನೆ - ದಿನೇಶ್ ಗುಂಡೂರಾವ್

೨. ಕೊಪ್ಪಳ ಜಿಲ್ಲೆಯ ಕಾಮನೂರು ಆಯುಷ್ಮಾನ್ ಆರೋಗ್ಯ ಮಂದಿರಕ್ಕೆ ರಾಷ್ಟ್ರೀಯ ಮಾನ್ಯತೆ

೩. ಸರ್ಕಾರಿ ಶಾಲಾ ಮಕ್ಕಳ ಸಮಗ್ರ ಬೆಳವಣಿಗೆಗೆ ಪ್ರತಿಭಾ ಕಾರಂಜಿ ಕಾರ್ಯಕ್ರಮ ಪೂರಕ - ಕೆ.ಎಚ್. ಮುನಿಯಪ್ಪ

೪. ಕರಾವಳಿ ಸೇರಿದಂತೆ ಹಲವು ಜಿಲ್ಲೆಗಳಿಗೆ ಭಾರೀ ಮಳೆಯ ಮುನ್ನೆಚ್ಚರಿಕೆ

**<><*<><>*><>**

ಸಾರ್ವಜನಿಕರ ಹಿತದೃಷ್ಟಯಿಂದ ಆಹಾರ ತಯಾರಿಕೆ ಘಟಕಗಳು ಸೂಕ್ತ ಕಾಳಜಿ ವಹಿಸಬೇಕು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸೂಚಿಸಿದ್ದಾರೆ. ಮಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಾದ್ಯಂತ ಹೋಟೆಲ್, ರೆಸ್ಟೋರೆಂಟ್ ಮತ್ತು ಆಹಾರ ಉತ್ಪನ್ನ ತಯಾರಿಕಾ ಘಟಕಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವಂತೆ ಇಲಾಖೆಯ ಸುರಕ್ಷತಾ ವಿಭಾಗಕ್ಕೆ ಈಗಾಗಲೇ ಆದೇಶಿಸಲಾಗಿದೆ ಎಂದರು. ಮೊದಲ ಹಂತವಾಗಿ ಇಂದು ಮತ್ತು ನಾಳೆ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಆಹಾರ ಸುರಕ್ಷತಾ ಪರಿಶೀಲನೆಯ ವಿಶೇಷ ಅಭಿಯಾನವನ್ನು ನಡೆಸಲಾಗುತ್ತಿದೆ. ತಿಂಡಿ-ತಿನುಸುಗಳ ತಯಾರಿಕೆ ವೇಳೆ ಸೂಕ್ತ ಎಚ್ಚರಿಕೆ ಪಾಲಿಸಬೇಕು. ಇದರಲ್ಲಿ ಯಾವುದೇ ರಾಜೀ ಇಲ್ಲ. ನಿರ್ಲಕ್ಷ್ಯ ಮಾಡುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಇನ್ನು ಮುಂದೆ ಪ್ರತಿ ತಿಂಗಳು ಆಹಾರ ಸುರಕ್ಷತಾ ಅಧಿಕಾರಿಗಳ ತಂಡ ರೆಸ್ಟೊರೆಂಟ್, ಹೋಟೆಲ್ ಇತರ ಆಹಾರ ತಯಾರಿಕಾ ಘಟಕಗಳಿಗೆ ನಿಯಮಿತವಾಗಿ ಭೇಟಿ ನೀಡಲಿದೆ. ಅಲ್ಲಿ ನಡೆಸುವ ಪರಿಶೀಲನಾ ವರದಿಯನ್ನು ಸಾರ್ವಜನಿಕರ ಮುಂದೆ ಇಡಲಾಗುವುದು ಎಂದು ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

**<><*<><>*><>**

ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಂಗಡಿಗಳಲ್ಲಿ ಮಾರುವ ಬೇಕರಿ ತಿನಿಸುಗಳು ಹಾಗೂ ಆಹಾರ ಉತ್ಪನ್ನಗಳ ಗುಣಮಟ್ಟ ಪರಿಶೀಲನೆಗೆ ಇಂದು ಮತ್ತೆ ನಾಳೆ ವಿಶೇಷ ಆಂದೋಲನವನ್ನು ಹಮ್ಮಿಕೊಳ್ಳಲಾಗಿದೆ. ಬೇಕರಿಯಲ್ಲಿ ಮಾರಾಟ ಮಾಡುವ ತಿಂಡಿ ತಿನಿಸುಗಳು ಗೋಬಿಮಂಚೂರಿ, ಕಬಾಬ್ ಮೊದಲಾದ ಪದಾರ್ಥಗಳ ಪರೀಕ್ಷೆ ನಡೆಸಿ, ಮಾದರಿಗಳನ್ನು ಸಂಶೋಧನೆಗೆ ಕಳುಹಿಸಲಾಗುವುದು. ಆಹಾರ ಉತ್ಪನ್ನಗಳಲ್ಲಿ ಕೃತಕ ಬಣ್ಣಗಳನ್ನು ಬಳಸುವಂತಿಲ್ಲ. ಹೊಟೇಲ್ ಮತ್ತಿತರ ಮಾರಾಟ ಮಳಿಗೆಗಳಲ್ಲಿ ಶುಚಿತ್ವ ಪಾಲನೆಗೆ ಆದ್ಯತೆ ನೀಡಬೇಕು. ತಪ್ಪಿತಸ್ಥರಿಗೆ ದಂಡ ಮತ್ತು ಕಾನೂನುರೀತಿ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಆಹಾರ ಮತ್ತು ಗುಣಮಟ್ಟ ಇಲಾಖೆ ಪ್ರಕಟಣೆ ಹೊರಡಿಸಿದೆ.

<><*<><>*><>

ಕೊಪ್ಪಳ ಜಿಲ್ಲೆಯ ಕಾಮನೂರು ಆಯುಷ್ಮಾನ್ ಆರೋಗ್ಯ ಮಂದಿರಕ್ಕೆ ರಾಷ್ಟ್ರೀಯ ಮಾನ್ಯತೆ ದೊರೆತಿದೆ ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ. ಪಿ.ಬಿ. ಹಿರೇಗೌಡರ್ ತಿಳಿಸಿದ್ದಾರೆ. ಕರ್ನಾಟಕ ಆಯುಷ್ ಇಲಾಖೆಯ ೫೦ ಆಯುಷ್ಮಾನ್ ಆರೋಗ್ಯ ಮಂದಿರಗಳಿಗೆ ರಾಷ್ಟ್ರೀಯ ಮಾನ್ಯತೆ ದೊರೆತಿದ್ದು, ಈ ಪೈಕಿ ಕಾಮನೂರು ಕೇಂದ್ರವೂ ಸೇರಿರುವುದು ಹೆಮ್ಮೆಯ ಸಂಗತಿ. ಕಾಮನೂರು ಕುಗ್ರಾಮದಲ್ಲಿರುವ ಆಯುಷ್ಮಾನ್ ಆರೋಗ್ಯ ಮಂದಿರಕ್ಕೆ ರಾಷ್ಟ್ರೀಯ ಮಾನ್ಯತೆ ದೊರೆತಿರುವುದು ಜಿಲ್ಲೆ ಮತ್ತು ರಾಜ್ಯಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಕೈಗಾರಿಕಾ ವಲಯದ ಬೆಳವಣಿಗೆಗೆ ರಾಜಧಾನಿ ಬೆಂಗಳೂರನ್ನು ಹೊರತುಪಡಿಸಿದಂತೆ ಹುಬ್ಬಳ್ಳಿ-ಧಾರವಾಡ-ಬೆಳಗಾವಿ ತ್ರಿವಳಿ ನಗರಗಳು ಅತ್ಯಂತ ಸೂಕ್ತ ಆಯ್ಕೆಯಾಗಿವೆ ಎಂದು ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ಶಾಸಕ ಶರತ್‌ಕುಮಾರ್ ಬಚ್ಚೇಗೌಡ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿಂದು ಮಾತನಾಡಿದ ಅವರು, ಹುಬ್ಬಳ್ಳಿ ಮತ್ತು ಬೆಳಗಾವಿಯಲ್ಲಿ ಕಿಯೊನಿಕ್ಸ್‌ಗೆ ಸೇರಿದ ಜಮೀನಿನಲ್ಲಿ ನವೋದ್ಯಮಿಗಳಿಗೆ ಪೂರಕ ವಾತಾವರಣ ನಿರ್ಮಾಣಕ್ಕೆ ಸಧ್ಯದಲ್ಲೇ ಚಾಲನೆ ದೊರೆಯಲಿದೆ ಎಂದರು. ಹುಬ್ಬಳ್ಳಿಯ ಐಟಿ ಪಾರ್ಕ್‌ನ್ನು ಬೆಂಗಳೂರು ಮಾದರಿಯಲ್ಲಿ ಅಭಿವೃದ್ಧಿಪಡಿಸಲಾಗುವುದು. ಹುಬ್ಬಳ್ಳಿ-ಧಾರವಾಡ-ಬೆಳಗಾವಿ ಕೈಗಾರಿಕಾ ವಲಯದಲ್ಲಿ ಈಗಾಗಲೇ ೩೦ಕ್ಕೂ ಹೆಚ್ಚು ಕಂಪನಿಗಳು ಕಾರ್ಯನಿರ್ವಹಿಸುತ್ತಿವೆ. ಸಾವಿರಾರು ವಿದ್ಯಾರ್ಥಿಗಳಿಗೆ ಉದ್ಯೋಗದ ಭರವಸೆ ದೊರೆತಿದೆ ಎಂದು ಶರತ್‌ಕುಮಾರ್ ಬಚ್ಚೇಗೌಡ ತಿಳಿಸಿದರು.

<><*<><>*><>

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಜನವರಿಯಿಂದ ಇಲ್ಲಿಯವರೆಗೆ ಒಟ್ಟು ೨೭೧ ಡೆಂಘಿ ಪ್ರಕರಣಗಳು ವರದಿಯಾಗಿವೆ. ಜುಲೈ ತಿಂಗಳಲ್ಲಿ ೧೨೦ ಮತ್ತು ಆಗಸ್ಟ್‌ನಲ್ಲಿ ೫೭ ಪ್ರಕರಣಗಳು ದಾಖಲಾಗಿವೆ ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ತಿಳಿಸಿದ್ದಾರೆ. ಜಿಲ್ಲೆಯ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ಡೆಂಘಿ ಸೋಂಕಿನ ಪರಿಸ್ಥಿತಿ ಬಗ್ಗೆ ಅವರು ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು. ಪ್ರಸ್ತುತ ಜಿಲ್ಲೆಯಲ್ಲಿ ಡೆಂಘಿ ಪ್ರಕರಣಗಳು ಕಡಿಮೆಯಾಗಿದ್ದರೂ, ಗ್ರಾಮಾಂತರ ಪ್ರದೇಶಗಳಲ್ಲಿ ಈಗಲೂ ಸೋಂಕು ಪ್ರಕರಣಗಳು ವರದಿಯಾಗುತ್ತಿರುವುದನ್ನು ನಿರ್ಲಕ್ಷಿಸಬಾರದು. ಸೋಂಕು ನಿಯಂತ್ರಣಕ್ಕೆ ಎಲ್ಲ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕಟ್ಟುನಿಟ್ಟಾಗಿ ಮುಂದುವರಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

<><*<><>*><>

ರಾಜ್ಯದ ಸರ್ಕಾರಿ ಶಾಲೆಗಳ ಪ್ರತಿಭಾವಂತ ಮಕ್ಕಳಿಗೆ ಉತ್ತೇಜನ ನೀಡುವಲ್ಲಿ ಪ್ರತಿಭಾ ಕಾರಂಜಿ ಅತ್ಯುತ್ತಮ ವೇದಿಕೆಯಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆ ಉಸ್ತುವಾರಿ ಸಚಿವ ಕೆ.ಎಚ್. ಮುನಿಯಪ್ಪ ಹೇಳಿದ್ದಾರೆ. ದೇವನಹಳ್ಳಿ ತಾಲೂಕು ಕುಂದಾಣ ಗ್ರಾಮದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಆಯೋಜಿಸಿದ್ದ ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಮಕ್ಕಳ ಸರ್ವಾಂಗೀಣ ಅಭಿವೃದ್ಧಿಯೇ ಶಾಲಾ ಶಿಕ್ಷಣ ಇಲಾಖೆಯ ಪ್ರಮುಖ ಉದ್ದೇಶವಾಗಿದೆ. ಪಠ್ಯ ವಿಷಯಗಳಲ್ಲದೆ, ಕಲೆ, ಸಾಹಿತ್ಯ, ಸಂಗೀತ, ನೃತ್ಯ, ಚಿತ್ರಕಲೆ ಮತ್ತು ಆಟೋಟಗಳಲ್ಲಿ ಮಕ್ಕಳಿಗೆ ಇರುವ ಆಸಕ್ತಿಯನ್ನು ಗುರುತಿಸಿ, ಸೂಕ್ತ ಉತ್ತೇಜನ ನೀಡುವ ಸಲುವಾಗಿ ಪ್ರತಿಭಾ ಕಾರಂಜಿ ಕಾರ್ಯಕ್ರಮದ ಮೂಲಕ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸುತ್ತಿರುವುದು ಉತ್ತಮ ಕ್ರಮವಾಗಿದೆ ಎಂದು ಸಚಿವ ಮುನಿಯಪ್ಪ ಹೇಳಿದರು.

<><*<><>*><>

ರಾಜ್ಯದ ವಿವಿಧೆಡೆ ಇಂದು ಧಾರಾಕಾರ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರಾವಳಿ ಜಿಲ್ಲೆಗಳಲ್ಲಿ ಮುಂದಿನ ಮೂರು ದಿನಗಳ ಕಾಲ ಭಾರೀ ಮಳೆಯಾಗಲಿದೆ. ಉಡುಪಿ ಜಿಲ್ಲೆಗೆ ಇಂದು ರೆಡ್ ಅಲರ್ಟ್ ಹಾಗೂ ನಾಳೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ದಕ್ಷಿಣ ಕನ್ನಡ ಹಾಗೂ ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ ಜಿಲ್ಲೆಗಳಿಗೆ ಇಂದು ಮತ್ತು ನಾಳೆ ಆರೆಂಜ್ ಅಲರ್ಟ್ ನೀಡಲಾಗಿದೆ. ಕಲಬುರಗಿ, ಯಾದಗಿರಿ, ರಾಯಚೂರು, ಬೆಳಗಾವಿ ಹಾಗೂ ಕೊಡಗು ಜಿಲ್ಲೆಗಳಿಗೆ ಯೆಲ್ಲೊ ಅಲರ್ಟ್ ನೀಡಲಾಗಿದೆ.

<><*<><>*><>

ಯಾದಗಿರಿ ಜಿಲ್ಲೆಯಲ್ಲಿ ಇದೇ ಭಾನುವಾರ ಸೆಪ್ಟೆಂಬರ್ ೧ ರಿಂದ ೩೦ರ ವರೆಗೆ ೨೧ನೇ ರಾಷ್ಟ್ರೀಯ ಜಾನುವಾರು ಗಣತಿ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಡಾ. ಬಿ. ಸುಶೀಲ ತಿಳಿಸಿದ್ದಾರೆ. ಅವರು ಇಂದು ರಾಷ್ಟ್ರೀಯ ಜಾನುವಾರು ಗಣತಿ ಮಾಹಿತಿ ಕರಪತ್ರ ಮತ್ತು ಸೂಚನಾ ಕೈಪಿಡಿ ಬಿಡುಗಡೆ ಮಾಡಿದರು. ಗಣತಿದಾರರು ಜಿಲ್ಲೆಯ ನಗರ ಮತ್ತು ಗ್ರಾಮೀಣ ಪ್ರದೇಶದ ಮನೆಗಳು, ಉದ್ಯಮ ಹಾಗೂ ಇತರ ಎಲ್ಲ ಸಂಸ್ಥೆಗಳಿಗೆ ಭೇಟಿ ನೀಡಿ, ಸಾಕು ಪ್ರಾಣಿಗಳು ಮತ್ತು ಪಕ್ಷಿಗಳ ಮಾಹಿತಿ ಸಂಗ್ರಹಿಸುತ್ತಾರೆ. ಸಾರ್ವಜನಿಕರು ಮತ್ತು ರೈತರು ಸಹರಿಸಬೇಕು ಎಂದು ಮನವಿ ಮಾಡಿದರು. ಇದಲ್ಲದೆ, ರಸ್ತೆಗಳಲ್ಲಿರುವ ದನಕರು, ನಾಯಿಗಳ ಮಾಹಿತಿಯನ್ನೂ ಸಂಗ್ರಹಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

<><*<><>*><>

ತುಮಕೂರು ಜಿಲ್ಲೆಯಲ್ಲಿ ವಿವೇಕ ಯೋಜನೆಯಡಿ ಮಂಜೂರಾಗಿರುವ ೩೬೦ ಶಾಲಾ ಕೊಠಡಿ ನಿರ್ಮಾಣ ಕಾಮಗಾರಿಯನ್ನು ಬರುವ ವರ್ಷ ಜನವರಿ ತಿಂಗಳೊಳಗೆ ಪೂರ್ಣಗೊಳಿಸಬೇಕು. ಉದಾಸೀನ ಮಾಡುವ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಜಿ. ಪ್ರಭು ಕಾಮಗಾರಿ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದಾರೆ. ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಅವರು ವಿಡಿಯೋ ಕಾನ್ಫರೆನ್ಸ್ ನಡೆಸಿದರು. ಜಿಲ್ಲೆಯಲ್ಲಿರುವ ಶಾಲೆ ಮತ್ತು ಅಂಗನವಾಡಿ ಕಟ್ಟಡಗಳಲ್ಲಿ ಶಿಥಿಲಾವಸ್ಥೆಯಲ್ಲಿರುವ ಕೊಠಡಿ ಮತ್ತು ಶೌಚಾಲಯಗಳನ್ನು ನೆಲಸಮಗೊಳಿಸುವಂತೆ ಅವರು ಸೂಚಿಸಿದರು. ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಪ್ರಮಾಣ ಸುಧಾರಣೆಗಾಗಿ ಶಿಕ್ಷಕರಿಗೆ ತರಬೇತಿ, ವಿದ್ಯಾರ್ಥಿಗಳಿಗೆ ಉತ್ತೇಜನ ಹಾಗೂ ಕೌಶಲ್ಯ ಮತ್ತು ಸೃಜನಶೀಲತೆ ಹೆಚ್ಚಳಕ್ಕೆ ಶಿಕ್ಷಕರಿಗೆ ವಸತಿ ಸಹಿತ ತರಬೇತಿ ನೀಡಲು ಅಗತ್ಯ ಸಿದ್ಧತೆಗೂ ಅವರು ಸೂಚಿಸಿದರು. ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

<><*<><>*><>

ಕ್ರೀಡಾ ಕ್ಷೇತ್ರದಲ್ಲಿ ಅಸಾಧಾರಣ ಪ್ರತಿಭೆ ತೋರುವ ರಾಜ್ಯದ ಅರ್ಹ ಕ್ರೀಡಾಪಟುಗಳಿಂದ ೨೦೨೩ನೇ ಸಾಲಿನ ಏಕಲವ್ಯ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಈ ಪ್ರಶಸ್ತಿಗಳನ್ನು ಕೊಡಮಾಡುತ್ತದೆ. ನಿಗದಿತ ಅರ್ಜಿ ನಮೂನೆ ಹಾಗೂ ಮಾರ್ಗಸೂಚಿಗಳನ್ನು ಇಲಾಖೆಯ ಕಚೇರಿಯಿಂದ ಪಡೆಯಬಹುದು. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ ೧೬ ಕಡೆಯ ದಿನ ಎಂದು ಇಲಾಖೆಯ ಉತ್ತರಕನ್ನಡ ಜಿಲ್ಲಾ ಕಚೇರಿಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

<><*<><>*><>

<u>ಸಂಕ್ಷಿಪ್ತ ಸುದ್ದಿಗಳು</u>

೧. ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯ ಆಸ್ತಿಗಳ ಮೇಲಿನ ಸ್ವಯಂಘೋಷಿತ ತೆರಿಗೆ ಪಾವತಿಗೆ ಶೇಕಡ ೫ರಷ್ಟು ರಿಯಾಯಿತಿ ಪಡೆಯುವ ಕಾಲಾವಧಿಯನ್ನು ಸೆಪ್ಟೆಂಬರ್ ೧೪ರ ವರೆಗೆ ವಿಸ್ತರಿಸಲಾಗಿದೆ ಎಂದು ಪಾಲಿಕೆಯ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

೨. ಭಾರತ ಸರ್ಕಾರದ ೧೬ನೇ ಕೇಂದ್ರ ಹಣಕಾಸು ಆಯೋಗದ ತಂಡ ಇಂದು ಮತ್ತು ನಾಳೆ ವಿಜಯನಗರ ಜಿಲ್ಲೆಯ ಹಂಪಿಗೆ ಭೇಟಿ ನೀಡಲಿದೆ.

೩. ಉತ್ತರ ಕನ್ನಡ ಜಿಲ್ಲೆಯ ಕಾರವಾರದಲ್ಲಿ ಇಂದು ವಿದ್ಯಾರ್ಥಿಗಳಿಗಾಗಿ ಐದು ಕಿಲೋಮೀಟರ್ ರೆಡ್ ರಿಬ್ಬನ್ ಮ್ಯಾರಥಾನ್ ಓಟದ ಸ್ಪರ್ಧೆ ನಡೆಯಿತು. ಯುವಜನತೆಗೆ ಮಾದಕ ವಸ್ತುಗಳ ಬಳಕೆ ಹಾಗೂ ಅಸುರಕ್ಷಿತ ಲೈಂಗಿಕತೆಯ ಅಪಾಯಗಳ ಬಗ್ಗೆ ಮಾಹಿತಿ ತಲುಪಿಸುವ ಸಲುವಾಗಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ, ಜಿಲ್ಲಾಡಳಿತದ ವಿವಿಧ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಿತ್ತು.

೪. ಕೋಲಾರ ಜಿಲ್ಲೆಯಲ್ಲಿ ಕೇಂದ್ರ ಸರ್ಕಾರದ ಆತ್ಮ ಯೋಜನೆಯನ್ನು ಸಮರ್ಪಕವಾಗಿ ಜಾರಿಗೊಳಿಸಬೇಕು. ರೈತರಿಗೆ ನೂತನ ಕೃಷಿ ತಂತ್ರಜ್ಞಾನದ ಬಗ್ಗೆ ತಿಳುವಳಿಕೆ ಮೂಡಿಸಲು ಪೂರಕ ತರಬೇತಿ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಮಂಗಳ ಅಧಿಕಾರಿಗಳಿಗೆ ತಿಳಿಸಿದ್ದಾರೆ.

೫. ೨೦೨೪-೨೫ನೇ ಸಾಲಿನಲ್ಲಿ ಕೃಷಿ ಭಾಗ್ಯ ಯೋಜನೆ ಅನುಷ್ಠಾನಗೊಂಡಿದ್ದು, ಜಿಲ್ಲೆಯ ರೈತರು ಈ ಯೋಜನೆಯಡಿ ಸದುಪಯೋಗ ಪಡೆದುಕೊಳ್ಳುವಂತೆ ಕೊಪ್ಪಳ ಜಂಟಿ ಕೃಷಿ ನಿರ್ದೇಶಕರಾದ ಟಿ.ಎಸ್.ರುದ್ರೇಶಪ್ಪ ಅವರು ತಿಳಿಸಿದ್ದಾರೆ. ಪ್ರಸಕ್ತ ಸಾಲಿನಲ್ಲಿ ಕೃಷಿ ಭಾಗ್ಯ ಯೋಜನೆಯಡಿ ಅನುಷ್ಠಾನಗೊಳಿಸುತ್ತಿದ್ದು, ರೈತರು ತಮ್ಮ ಜಮೀನುಗಳಲ್ಲಿ ಕೃಷಿ ಹೊಂಡಗಳನ್ನು ನಿರ್ಮಿಸಿಕೊಂಡು ಮಳೆ ನೀರನ್ನು ಸಂಗ್ರಹಿಸಿ ಬೆಳೆಗಳ ಸಂದಿಗ್ಧ ಹಂತದಲ್ಲಿ ರಕ್ಷಣಾತ್ಮಕ ನೀರಾವರಿ ಒದಗಿಸುವುದು ಯೋಜನೆಯ ಉದ್ದೇಶವಾಗಿದೆ. ಪ್ರತಿಯೊಬ್ಬ ಫಲಾನುಭವಿಗೆ ವಿವಿಧ ಘಟಕಗಳನ್ನು ಕಡ್ಡಾಯವಾಗಿ ಅನುಷ್ಠಾನಮಾಡಲಾಗುವುದು ಎಂದು ಅವರು ಹೇಳಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>